## 31. ಬಜೆಟ್: ಕೋವಿಡ್ ಕಡೆಗಣನೆ

ಕೋವಿಡ್–19 ನಿಯಂತ್ರಣದ ಸಲುವಾಗಿ ಹೇರಿರುವ ಲಾಕ್‌ಡೌನ್ ನಡುವೆಯೂ ಮಂಡನೆಯಾಗಿರುವ ಬಿಬಿಎಂಪಿಯ 2020–21ನೇ ಸಾಲಿನ ಬಜೆಟ್‌ನಲ್ಲಿ ಈ ರೋಗ ನಿಯಂತ್ರಣಕ್ಕಾಗಲೀ ಅಥವಾ ಲಾಕ್‌ಡೌನ್ ಸಂತ್ರಸ್ತರಿಗಾಗಲೀ ಯಾವುದೇ ಪ್ಯಾಕೇಜ್ ಘೋಷಿಸಿಲ್ಲ.

2020ರ ಸೆಪ್ಟೆಂಬರ್‌ನಲ್ಲಿ ನಡೆಯಬೇಕಾಗಿರುವ ಪಾಲಿಕೆ ಚುನಾವಣೆ ಮೇಲೆ ಕಣ್ಣಿಟ್ಟೇ ಬಜೆಟ್ ಮಂಡಿಸಿರುವ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ಅಧ್ಯಕ್ಷ ಎಲ್. ಶ್ರೀನಿವಾಸ್, ನಗರದ 2.5 ಲಕ್ಷ ಮನೆಗಳಿಗೆ ತಿಂಗಳಿಗೆ 10 ಸಾವಿರ ಲೀಟರ್ ಉಚಿತ ನೀರು ಪೂರೈಕೆ, ನಾಡಪ್ರಭು ಕೆಂಪೇಗೌಡರ ಹೆಸರಿನಲ್ಲಿ 8 ಕಡೆ ಸ್ವಾಗತ ಕಮಾನುಗಳ ನಿರ್ಮಾಣ, ಬಿಬಿಎಂಪಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್, ಉಚಿತ ಲ್ಯಾಪ್‌ಟಾಪ್ ವಿತರಣೆಯಂತಹ ಜನಪ್ರಿಯ ಯೋಜನೆಗಳನ್ನು ಘೋಷಿಸಿದೆ.

ಬಜೆಟ್‌ನಲ್ಲಿ ಒಂದು ಕಡೆ ಮಾತ್ರ ಕೊರೋನಾ ತಡೆಗಟ್ಟುವ ಕುರಿತು ಪ್ರಸ್ತಾಪಿಸಲಾಗಿದೆ. ರೋಗ ನಿಯಂತ್ರಣಕ್ಕೆ ಹೆಚ್ಚುವರಿ ಅನುದಾನ ನೀಡುವ ಬದಲು ವಾರ್ಡ್‌ಗಳ ಅಭಿವೃದ್ಧಿಗಾಗಿ ನೀಡುವ ರೂ.2 ಕೋಟಿ ಅನುದಾನದಲ್ಲಿ ತಲಾ ರೂ.25 ಲಕ್ಷವನ್ನು ಮುಖ್ಯಮಂತ್ರಿ ಪರಿಹಾರ ನಿಧಿಗೆ ನೀಡುವುದಾಗಿ ಬಜೆಟ್‌ನಲ್ಲಿ ಹೇಳಲಾಗಿದೆ. ಇದಕ್ಕಾಗಿ ರೂ.49.50 ಕೋಟಿ ಅನುದಾನ ಮೀಸಲಿಡಲಾಗಿದೆ.

ಆರೋಗ್ಯ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದ ಕಾರ್ಯಕ್ರಮಗಳಿಗೆ ಬಜೆಟ್ ಗಾತ್ರದಲ್ಲಿ ಕೇವಲ ಶೇ:1 ರಷ್ಟು ಅನುದಾನ ಹಂಚಿಕೆ ಮಾಡಲಾಗಿದೆ. ಇದಕ್ಕೆ ಪ್ರತಿಕ್ರಿಯಿಸಿದ ಶ್ರೀನಿವಾಸ್ ಆಸ್ಪತ್ರೆಗಳಿಗೆ ಈ ಹಿಂದೆಯೂ ವಿವಿಧ ಯೋಜನೆಗಳಡಿ ಅನುದಾನ ನೀಡಲಾಗಿದೆ. ಸರ್ಕಾರದ ಅನುದಾನವೂ ಇವುಗಳಿಗೆ ಲಭಿಸುತ್ತದೆ ಎಂದರು.

ದೆಹಲಿ ಸರ್ಕಾರದ ಮಾದರಿಯಲ್ಲಿ ಪ್ರತಿ ಮನೆ ಬಳಕೆಯ ಸಂಪರ್ಕಕ್ಕೆ ತಿಂಗಳಿಗೆ ತಲಾ 10 ಸಾವಿರ ಲೀಟರ್ ನೀರನ್ನು ಉಚಿತವಾಗಿ ನೀಡುವ ಮಹತ್ವಾಕಾಂಕ್ಷೆ ಯೋಜನೆಯನ್ನು ಬಿಬಿಎಂಪಿ ಪ್ರಕಟಿಸಿದೆ. ಲಾಕ್‌ಡೌನ್‌ನಿಂದ ಸಂಕಷ್ಟಕ್ಕೆ ಸಿಲುಕಿರುವ ಬಡ ಕುಟುಂಬಗಳಿಗೂ ಇದರಿಂದ ನೆರವಾಗಲಿದೆ ಎಂದು ಮೇಯರ್ ವಿವರಿಸಿದರು.

ಬಿಬಿಎಂಪಿ ಅಧೀನದ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳ ಉಚಿತ ಪ್ರಯಾಣಕ್ಕೆ ಬಿಎಂಟಿಸಿ ಬಸ್ ಪಾಸ್ ನೀಡಲು ರೂ.75 ಲಕ್ಷ ಬಡ ವಿದ್ಯಾರ್ಥಿಗಳಿಗೆ ದಿವಂಗತ ಅನಂತ ಕುಮಾರ್ ಹೆಸರಿನಲ್ಲಿ ಉಚಿತ ಲ್ಯಾಪ್‌ಟಾಪ್ ವಿತರಣೆಗೆ ರೂ.15 ಕೋಟಿ ಕಾಯ್ದಿರಿಸಲಾಗಿದೆ. ಪ್ರತಿ ವಾರ್ಡ್‌ಗೆ 15 ಲ್ಯಾಪ್‌ಟಾಪ್‌ಗಳನ್ನು ಹಂಚಿಕೆ ಮಾಡಲಾಗಿದೆ. ಮಹಿಳೆಯರ ಸಲುವಾಗಿ ಕಾರ್ಯಕ್ರಮ ಹಮ್ಮಿಕೊಳ್ಳಲು ಪ್ರತಿ ವಾರ್ಡ್‌ಗೆ ತಲಾ ರೂ.5 ಲಕ್ಷ ವಿಶೇಷ ಅನುದಾನ ಹಂಚಿಕೆ ಮಾಡಲಾಗಿದ್ದು, ಇದಕ್ಕಾಗಿ ರೂ.9.90 ಕೋಟಿ ಕಾಯ್ದಿರಿಸಲಾಗಿದೆ.

ಕೊರೊನಾ ಸಂಕಷ್ಟದ ನಡುವೆಯೂ ಶೇ:49ರಷ್ಟು ಅನುದಾನ ಮೂಲ ಸೌಕರ್ಯ ಅಭಿವೃದ್ದಿಗೆ ಕಾಯ್ದಿರಿಸಲಾಗಿದೆ. ಈಗಿನ ಆಡಳಿತವು ಈ ವರ್ಷದ ಸೆಪ್ಟೆಂಬರ್‌ವರೆಗೆ ಮಾತ್ರ. ಸೋಂಕು ನಿಯಂತ್ರಣಕ್ಕೆ ಹೇರಿರುವ ಲಾಕ್‌ಡೌನ್ ಅನ್ನು ಹಿಂಪಡೆದ ಬಳಿಕವೂ ಅದರಿಂದ ಜನರು ಎದುರಿಸುವ ಸಂಕಷ್ಟಗಳು ಮುಂದುವರಿಯಲಿವೆ. ಈ ತುರ್ತು ಸಂದರ್ಭದಲ್ಲಿ ಮಂಡಿಸಿದ ಬಜೆಟ್‌ನಲ್ಲಿ ಕೊರೊನಾ ನಿಯಂತ್ರಣಕ್ಕೆ ಆದ್ಯತೆ ಸಿಗಬೇಕಿತ್ತು.

ಆಧಾರ:ಪ್ರಜಾವಾಣಿ, ದಿನಾಂಕ:21.04.2020.